ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಉದ್ಯೋಗ ಖಾತ್ರಿ ಯೋಜನೆ ಕುರಿತು

ಡಾ|| ಜಯಮಾಲ ರಾಮಚಂದ್ರ(ನಾಮನಿರ್ದೇಶನ ಹೊಂದಿದವರು):-

858 (1123) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 03 ವರ್ಷಗಳಿಂದ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸಾಧಿಸಿರುವ ಗುರಿಗಳೇನು ಹಾಗೂ ಬಿಡುಗಡೆಗೊಳಿಸಲಾದ ಮೊತ್ತವೆಷ್ಟು ;

(ಆ) ಕಳೆದ 03 ವರ್ಷಗಳಿಂದ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಎಷ್ಟು ಕುಟುಂಬಗಳಿಗೆ ಉದ್ಯೋಗವನ್ನು ನೀಡಲಾಗಿದೆ;

(ಇ) ರಾಜ್ಯದಲ್ಲಿ ನೆರೆಯಿಂದ ಆಸ್ತಿ-ಪಾಸ್ತಿಗಳು ನಾಶವಾಗಿ ಬದುಕು ಕಟ್ಟಿಕೊಳ್ಳಲಾಗದವರಿಗೆ ಹೆಚ್ಚಿನ ಅನುದಾನ ನೀಡುವ ಮೂಲಕ ಉದ್ಯೋಗ ಸೃಷ್ಟಿ ಮಾಡುವ ಚಿಂತನೆ ಸರ್ಕಾರಕ್ಕಿದೆಯೇ;

(ಈ) ಈ ಯೋಜನೆಗೆ ಸಂಬಂಧಿಸಿದ ಕಾರ್ಯಕ್ರಮಗಳಡಿಯಲ್ಲಿ ಎಷ್ಟು ಕಾಮಗಾರಿಗಳನು ಪೂರ್ಣಗೊಳಿಸಲಾಗಿದೆ?

(ಜಿಲ್ಲಾವಾರು ಮಾಹಿತಿ ನೀಡುವುದು)